ವಿಜಯಪುರ ಮಹಾನಗರಪಾಲಿಕೆ,
ವಿಜಯಪುರ.
ಬಾಗಲಕೋಟ ರೋಡ, ಜಲನಗರ–586109
ದೂರವಾಣಿ :08352–278536
ಫ್ಯಾಕ್ಸ್ :08352–278532

ಕರ್ನಾಟಕ ಸರ್ಕಾರ
(ನಗರಾಭಿವೃದ್ಧಿ ಇಲಾಖೆ)

VIJAYAPUR CITY CORPORATION
VIJAYAPUR.
Bagalkot Road, Jalanagar-586109
Website:www.bijapurcity.mrc.gov.in
E-Mail ID: itstaff_ulb_bijapur@yahoo.co.in

ನಂ.ಮನಪಾವಿ:ಸಿಬ್ಬಂದಿ:ಪೌಕಾನೇ:ಸಿಆರ್–4657:2023–24 ದಿನಾಂಕ:31–01–2024

## –:ಅಧಿಸೂಚನೆ:–

### ಪೌರಕಾರ್ಮಿಕರ ಹುದ್ದೆಗಳಿಗೆ ಅರ್ಜಿ ಆಹ್ವಾನಿಸುವ ಬಗ್ಗೆ.

ಸರ್ಕಾರದ ಆದೇಶ ಸಂಖ್ಯೆ: ನಅಇ 171 ಎಂಎನ್ಇ 2022 (ಇ) ಬೆಂಗಳೂರು, ದಿನಾಂಕ:09–03–2023ರಂತೆ ರಾಜ್ಯದ ಮಹಾನಗರಪಾಲಿಕೆಗಳಿಗೆ (ಬಿಬಿಎಂಪಿ ಹೊರತು ಪಡಿಸಿ) ಸಂಖ್ಯಾತಿರಿಕ್ತ ಪೌರಕಾರ್ಮಿಕರ ಹುದ್ದೆಗಳನ್ನು ಸೃಜಿಸಲಾಗಿದ್ದು, ಅದರನ್ವಯ ಸರ್ಕಾರದ ಆದೇಶ ಸಂಖ್ಯೆ: ನಅಇ 171 ಎಂಎನ್ಇ 2022 (ಇ) ಬೆಂಗಳೂರು, ದಿನಾಂಕ:02–11–2023ರಂತೆ ವಿಜಯಪುರ ಮಹಾನಗರಪಾಲಿಕೆಗೆ ಹಂಚಿಕೆ ಮಾಡಲಾಗಿರುವ ಸಂಖ್ಯಾತಿರಿಕ್ತ 93 ಪೌರಕಾರ್ಮಿಕರ ಹುದ್ದೆಗಳನ್ನು ಭರ್ತಿ ಮಾಡಲು, ಅರ್ಹ ಅಭ್ಯರ್ಥಿಗಳಿಂದ ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ನಮೂನೆಗಳನ್ನು ದಿನಾಂಕ:05–02–2024 ರಿಂದ ದಿನಾಂಕ:05–03–2024 ರವರೆಗೆ ವಿಜಯಪುರ ಮಹಾನಗರಪಾಲಿಕೆಯ ಆಡಳಿತ ಶಾಖೆಯಲ್ಲಿ ಪಡೆದು ಅಗತ್ಯ ದಾಖಲೆಗಳೊಂದಿಗೆ ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ:05–03–2024ರ ಸಂಜೆ 05:30 ಘಂಟೆಯೊಳಗೆ ಕಛೇರಿಗೆ ಸಲ್ಲಿಸತಕ್ಕದ್ದು.

| ಕ್ರ ಸಂ | ಹುದ್ದೆಯ ಹೆಸರು ಮತ್ತು ವೇತನ ಶ್ರೇಣಿ | ಹುದ್ದೆಗಳ ಸಂಖ್ಯೆ | ಅರ್ಹತೆ |
|---|---|---|---|
| 1 | ಪೌರಕಾರ್ಮಿಕರು (17000–28950) | 93 | 1. ಕನ್ನಡ ಭಾಷೆ ಮಾತನಾಡಲು ಗೊತ್ತಿರಬೇಕು.<br>2. ವಿಜಯಪುರ ಮಹಾನಗರಪಾಲಿಕೆಯಲ್ಲಿ ಹಾಲಿ ನೇರಪಾವತಿ/ ದಿನಗೂಲಿ/ಕ್ಷೇಮಾಭಿವೃದ್ಧಿ ಅಧಿನಿಯಮ/ಸಮಾನ ಕೆಲಸಕ್ಕೆ ಸಮಾನ ವೇತನದಡಿ ಎರಡು ವರ್ಷಕ್ಕಿಂತ ಕಡಿಮೆಯಿಲ್ಲದಂತೆ ನಿರಂತರವಾಗಿ ಪೌರಕಾರ್ಮಿಕರ ಹುದ್ದೆಯಲ್ಲಿ ಕೆಲಸ ನಿರ್ವಹಿಸುತ್ತಿರಬೇಕು.<br>3. ಗರಿಷ್ಠ ವಯೋಮಿತಿ 55 ವರ್ಷಗಳನ್ನು ಮೀರಿರಬಾರದು. (ದಿನಾಂಕ:09–03–2023ಕ್ಕೆ) |

ಮೀಸಲಾತಿ ವಿವರ

| ಮೀಸಲಾತಿ | ಇತರೆ | ಮಹಿಳೆ | ಗ್ರಾಮೀಣ | ಮಾ.ಸೈ | ಯೋ.ನಿ | ಕ.ಮಾ.ಅ | ವಿ.ಚೇ | ತೃ.ಲಿಂ | ಒಟ್ಟು |
|---|---|---|---|---|---|---|---|---|---|
| ಪ.ಜಾ | 2 | 6 | 5 | 1 | 0 | 1 | 1 | 0 | 16 |
| ಪ.ಪಂ | 2 | 2 | 2 | 0 | 0 | 0 | 1 | 0 | 7 |
| ಪ್ರ–1 | 1 | 1 | 1 | 0 | 0 | 0 | 1 | 0 | 4 |
| ಪ್ರ–2(ಎ) | 2 | 5 | 4 | 1 | 0 | 1 | 1 | 0 | 14 |
| ಪ್ರ–2(ಬಿ) | 1 | 1 | 1 | 0 | 0 | 0 | 1 | 0 | 4 |
| ಪ್ರ–3(ಎ) | 1 | 1 | 1 | 0 | 0 | 0 | 0 | 0 | 3 |
| ಪ್ರ–3(ಬಿ) | 1 | 1 | 1 | 0 | 0 | 0 | 1 | 0 | 4 |
| ಸಾ.ಅ | 7 | 13 | 10 | 4 | 2 | 2 | 2 | 1 | 41 |
| ಒಟ್ಟು | 17 | 30 | 25 | 6 | 2 | 4 | 8 | 1 | 93 |

**ವಿಶೇಶ ಸೂಚನೆ:**

1. ಅಧಿಸೂಚನೆಯನ್ನು ಪಾಲಿಕೆ ವೆಬ್–ಸೈಟ್ www.vijayapuracity.mrc.gov.in ನಲ್ಲಿ ಹಾಗೂ ಮಹಾನಗರ ಪಾಲಿಕೆಯ ಸೂಚನಾ ಫಲಕದಲ್ಲಿ ವಿಕ್ಷೀಸಬಹುದು.
2. ಈ ನೇಮಕಾತಿಯು ಸರ್ಕಾರ/ಪೌರಾಡಳಿತ ನಿರ್ದೇಶನಾಲಯದಿಂದ ಕಾಲಕಾಲಕ್ಕೆ ಹೊರಡಿಸಲಾಗುವ ಆದೇಶ ಮತ್ತು ಸುತ್ತೋಲೆಗಳ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.

1. **ಅರ್ಜಿ ಸಲ್ಲಿಕೆ ವಿಧಾನ ಮತ್ತು ಸ್ವೀಕೃತಿ ಕಾಲಮಿತಿ:**

- ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ: 05–02–2024
- ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 05–03–2024 (ಸಾಯಂಕಾಲ 05:30 ಘಂಟೆಯೊಳಗಾಗಿ)
- ನಿಗದಿಪಡಿಸಿದ ನಮೂನೆಯಲ್ಲಿಯೇ ಅರ್ಜಿ ಸಲ್ಲಿಸಬೇಕು ಇತರೆ ಯಾವುದೇ ನಮೂನೆಯಲ್ಲಾಗಲೀ ಅಥವಾ ಬೆರಳಚ್ಚು/ಛಾಯಾ (ಜೆರಾಕ್ಸ) ಪ್ರತಿಯಲ್ಲಿ ಸಲ್ಲಿಸಲ್ಪಡುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
- ಯಾವುದೇ ಅಭ್ಯರ್ಥಿಯು ಒಂದಕ್ಕಿಂತ ಹೆಚ್ಚು ಬಾರಿ ಅರ್ಜಿ ಸಲ್ಲಿಸಿದಲ್ಲಿ, ಒಂದು ಅರ್ಜಿಯನ್ನು ಪರಿಗಣಿಸಿ ಉಳಿದಂತಹ ಅರ್ಜಿಗಳನ್ನು ಯಾವುದೇ ಮುನ್ಸೂಚನೆಯಿಲ್ಲದೇ ತಿರಸ್ಕರಿಸಲಾಗುವುದು.
- ಅರ್ಜಿ ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ ಹಾಗೂ ಸಮಯದ ನಂತರ ಬರುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.
- ಅರ್ಜಿಗಳನ್ನು ಖುದ್ದಾಗಿ ಕಚೇರಿಗೆ ಸಲ್ಲಿಸತಕ್ಕದ್ದು, ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅಧಿಸೂಚನೆಯಲ್ಲಿ ನೀಡಿರುವ ಸೂಚನೆಗಳನ್ನು ಕಡ್ಡಾಯವಾಗಿ ಓದಿಕೊಳ್ಳತಕ್ಕದ್ದು ಹಾಗೂ ನೀಡಿರುವ ಸೂಚನೆಗಳನ್ವಯವೇ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು. ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸುವುದಲ್ಲದೇ ಅಂತಹವರ ವಿರುದ್ಧ ಪಾಲಿಕೆಯು ಕಾನೂನಿನ್ವಯ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

**ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು.**

| | | | |
|---|---|---|---|
| ಸಾ.ಅ | ಸಾಮಾನ್ಯ ಅರ್ಹತೆ | GM | General Merit |
| ಪ.ಜಾ | ಪರಿಶಿಷ್ಟ ಜಾತಿ | SC | Scheduled Caste |
| ಪ.ಪಂ | ಪರಿಶಿಷ್ಟ ಪಂಗಡ | ST | Scheduled Tribe |
| ಪ್ರ–1 | ಪ್ರವರ್ಗ–1 | CAT-1 | Category-1 |
| 2ಎ | ಪ್ರವರ್ಗ–2ಎ | 2A | Category-2A |
| 2ಬಿ | ಪ್ರವರ್ಗ–2ಬಿ | 2B | Category-2B |
| 3ಎ | ಪ್ರವರ್ಗ–3ಎ | 3A | Category-3A |
| 3ಬಿ | ಪ್ರವರ್ಗ–3ಬಿ | 3B | Category-3B |
| ಮಾ.ಸೈ | ಮಾಜಿ ಸೈನಿಕ | Ex-MP | Ex-Military person |
| ಗ್ರಾಮೀಣ | ಗ್ರಾಮೀಣ ಅಭ್ಯರ್ಥಿ | Rural | Rural Candidate |
| ಕ.ಮಾ.ಅ | ಕನ್ನಡ ಮಾಧ್ಯಮ ಅಭ್ಯರ್ಥಿ | KMS | Kannada Medium Studied Candidate |
| ವಿ.ಚೇ | ವಿಶೇಷ ಚೇತನ | PH | Physically Handicapped Person |
| ಯೋ.ನಿ.ಅ | ಯೋಜನೆಯಿಂದ ನಿರಾಶ್ರಿತ ಅಭ್ಯರ್ಥಿ | PDP | Project Displaced person |
| ತೃ.ಲಿಂ | ತೃತೀಯ ಲಿಂಗ | TG | Transgender |

**ವಿಶೇಷ ಸೂಚನೆ:**

* ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಅರ್ಜಿ ಭರ್ತಿ ಮಾಡುವ ಮೊದಲು ಅಧಿಸೂಚನೆಯಲ್ಲಿ ನೀಡಿರುವ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳುವುದು.

* ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ಯಾವುದಾದರೂ ಅನುಮಾನಗಳಿದ್ದಲ್ಲಿ ಕೇಚೇರಿಯ ಕೆಲಸದ ದಿನಗಳಲ್ಲಿ ಬೆಳಿಗ್ಗೆ 10–00 ಗಂಟೆಯಿಂದ ಸಂಜೆ 5–30 ಗಂಟೆಯವರೆಗೆ ಕಚೇರಿಯ ಆಡಳಿತ ಶಾಖೆಯನ್ನು ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸುವುದು.

2. **ಅರ್ಹತಾ ಷರತ್ತುಗಳು:**

ಎ)

1. ಭಾರತೀಯ ನಾಗರಿಕನಾಗಿರತಕ್ಕದ್ದು.
2. ಸರ್ಕಾರದ ಆದೇಶ ಸಂಖ್ಯೆ: ನಅಇ 171 ಎಂಎನ್ಇ 2022(ಇ) ದಿನಾಂಕ:09-03-2023 ರಲ್ಲಿ ಆದೇಶಿಸಿದರನ್ವಯ ದಿನಾಂಕ:09-03-2023 ಕ್ಕೆ 55 ವರ್ಷಗಳನ್ನು ಮೀರಿರಬಾರದು.
3. ವಿಜಯಪುರ ಮಹಾನಗರ ಪಾಲಿಕೆಯಲ್ಲಿ ದಿನಾಂಕ:09-03-2023 ಕ್ಕೆ 02 ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿರುವ ಹಾಗೂ ಸೇವೆಯಲ್ಲಿ ಮುಂದುವರೆಯುತ್ತಿರುವ ಹಾಲಿ ನೇರಪಾವತಿ/ದಿನಗೂಲಿ/ಕ್ಷೇಮಾಭಿವೃದ್ಧಿ ಅಧಿನಿಯಮ/ಸಮಾನ ಕೆಲಸಕ್ಕೆ ಸಮಾನ ವೇತನದಡಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಆದ್ಯತೆ ನೀಡಲಾಗುವುದು. (ESI ಮತ್ತು PF ಸೌಲಭ್ಯವನ್ನು ಹೊಂದಿರಬೇಕು)
4. ದೈಹಿಕ ದೃಢತೆ ಇರತಕ್ಕದ್ದು. (ಜಿಲ್ಲಾ ಆಸ್ಪತ್ರೆಯ ವೈದ್ಯಾಧಿಕಾರಿಯಿಂದ ಪಡೆದ ವೈದ್ಯಕೀಯ ಪ್ರಮಾಣ ಪತ್ರ ಲಗತ್ತಿಸಬೇಕು) (ವಿಶೇಷ ಚೇತನರಿಗೆ (PH) ಹೊರತುಪಡಿಸಿ)
5. ಕನ್ನಡ ಭಾಷೆ ಮಾತನಾಡುವ ಬಗ್ಗೆ ಜ್ಞಾನವಿರಬೇಕು. (ಕನ್ನಡ ಜ್ಞಾನದ ಬಗ್ಗೆ ಸ್ವಯಂ ಘೋಷಣಾ ಪತ್ರ ಲಗತ್ತಿಸಬೇಕು)
6. ಈ ಹುದ್ದೆಗೆ ಯಾವುದೇ ಶೈಕ್ಷಣಿಕ ವಿದ್ಯಾರ್ಹತೆ ಅಗತ್ಯವಿರುವುದಿಲ್ಲ.
7. ಅಭ್ಯರ್ಥಿಗಳ ವಯಸ್ಸನ್ನು ಶೈಕ್ಷಣಿಕ ದಾಖಲಾತಿಗಳು ಅಥವಾ ಆಧಾರ ಕಾರ್ಡ ಅಥವಾ ಚುನಾವಣಾ ಗುರುತಿನ ಚೀಟಿ ಅಥವಾ ಪಡಿತರ ಚೀಟಿ ಅಥವಾ ಪ್ರಾವಿಡೆಂಟ್ ಫಂಡ ಅಥವಾ ಇ.ಎಸ್.ಐ. ದಾಖಲೆಗಳನ್ನಾಧರಿಸಿ ಪರಿಗಣಿಸಲಾಗುವುದು.
8. ಸರ್ಕಾರದ ಆದೇಶ ಸಂಖ್ಯೆ:ನಅಇ 171 ಎಂಎನ್ಇ 2022(ಇ) ದಿನಾಂಕ:09-03-2023ರಲ್ಲಿ ತಿಳಿಸಿದ ನಿಯಮಗಳನ್ವಯ ನೇಮಕಾತಿ ಪ್ರಕ್ರಿಯೆ ನಡೆಸಲಾಗುವುದು.

ಬ) **ಅನರ್ಹತೆ ವಿಧಾನ:**

- ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ನೇಮಕಾತಿಗೆ ಅರ್ಹರಾಗುವುದಿಲ್ಲ.
- ಯಾವುದೇ ಕ್ರಿಮಿನಲ್ ಪ್ರಕರಣದಲ್ಲಿ ಭಾಗಿಯಾಗಿರಬಾರದು.
- ಈಗಾಗಲೇ ಗಂಭೀರ ಪ್ರಕರಣದ ಕಾರಣ ಸೇವೆಯಿಂದ ತೆಗೆದುಹಾಕಿರಬಾರದು.

**3) ನೇಮಕಾತಿ ವಿಧಾನ**

1. ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ:ನಅಇ 171 ಎಂಎನ್ಇ 2022(ಇ) ದಿನಾಂಕ:09-03-2023 ರ ನಿಯಮಗಳನ್ವಯ ನಿಯಮದ ಪ್ರಾರಂಭದ ದಿನಾಂಕಕ್ಕೆ ಮುಂಚೆ ಪಾಲಿಕೆಯಲ್ಲಿ 02 ವರ್ಷಗಳಿಗಿಂತ ಕಡಿಮೆಯಿಲ್ಲದಂತೆ ನಿರಂತರವಾಗಿ ಸೇವೆ ಸಲ್ಲಿಸುತ್ತಿರುವ ಮತ್ತು ಹಾಗೇ ಸೇವೆ ಸಲ್ಲಿಸಿ, ಕಾರ್ಯನಿರ್ವಹಿಸುತ್ತಿರುವುದನ್ನು ಮುಂದುವರೆಸುತ್ತಿರುವ ಹಾಲಿ ನೇರಪಾವತಿ/ದಿನಗೂಲಿ/ಕ್ಷೇಮಾಭಿವೃದ್ಧಿ ಅಧಿನಿಯಮ/ಸಮಾನ ಕೆಲಸಕ್ಕೆ ಸಮಾನ ವೇತನದಡಿ ಕಾರ್ಯನಿರ್ವಹಿಸುತ್ತಿರುವವರಿಗೆ ಅನುಕ್ರಮವಾಗಿ ಆದ್ಯತೆ ನೀಡಲಾಗುವುದು.
2. ಕಡಿಮೆ ವರ್ಷ ಸೇವೆ ಸಲ್ಲಿಸಿರುವುದಕ್ಕಿಂತ ಹೆಚ್ಚು ವರ್ಷ ಸೇವೆ ಸಲ್ಲಿಸಿದವರನ್ನು ಪರಿಗಣಿಸಲಾಗುವುದು.
3. ನೇರಪಾವತಿ/ದಿನಗೂಲಿ/ಕ್ಷೇಮಾಭಿವೃದ್ಧಿ ಅಧಿನಿಯಮ/ಸಮಾನ ಕೆಲಸಕ್ಕೆ ಸಮಾನ ವೇತನದಡಿ ಕಾರ್ಯ ನಿರ್ವಹಿಸುತ್ತಿರುವವರಿಗೆ ಪಾಲಿಕೆಯಿಂದ ದಿನಾಂಕ:09-03-2023 ಕ್ಕಿಂತ ಮುಂಚೆ ಕನಿಷ್ಠ 02 ವರ್ಷಗಳು ಕಾರ್ಯನಿರ್ವಹಿಸಿರುವ ಮತ್ತು ವೇತನವನ್ನು ಪಾವತಿಸಿರುವ ದಾಖಲೆಯನ್ನು ಪರಿಗಣಿಸಲಾಗುವುದು.
4. ಎರಡು ಅಥವಾ ಅದಕ್ಕಿಂತ ಹೆಚ್ಚಿನ ಅಭ್ಯರ್ಥಿಗಳ ಜೇಷ್ಠತೆಯನ್ನು ಅವರ ವಯಸ್ಸಿನ ಅನುಗುಣವಾಗಿ ಅಂದರೆ ಹೆಚ್ಚು ವಯಸ್ಕರನ್ನು ಕಡಿಮೆ ವಯಸ್ಕರಿಗಿಂತ ಮೇಲೆ ಪರಿಗಣಿಸಲಾಗುವುದು ಹಾಗೂ ಹುಟ್ಟಿದ ದಿನಾಂಕ ಹಾಗೂ ಸೇವಾ ಅವಧಿಯು ಒಂದೇ ಆಗಿದ್ದಲ್ಲಿ ಲಾಟರಿ ಮುಖಾಂತರ ಪರಿಗಣಿಸಲಾಗುವುದು.
5. ಸಂಖ್ಯಾತಿರಿಕ್ತ ಪೌರಕಾರ್ಮಿಕರ ಹುದ್ದೆಗಳನ್ನು ಭರ್ತಿ ಮಾಡಬೇಕಾದರೆ ಸಮತಳ ಮೀಸಲಾತಿಯಡಿ ಕನ್ನಡ ಮಾಧ್ಯಮ, ಗ್ರಾಮೀಣ ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳಿಗೆಂದು ಮೀಸಲಾದ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದ ಪಕ್ಷದಲ್ಲಿ ಈ ಮೀಸಲಾದ ಹುದ್ದೆಗಳಿಗೆ ಉಳಿದ ಅರ್ಹರಿರುವ ಪೌರಕಾರ್ಮಿಕರುಗಳನ್ನು ನೇಮಕಾತಿಗೆ ಪರಿಗಣಿಸಲಾಗುವುದು. (ಸರ್ಕಾರದ ಆದೇಶ ಸಂಖ್ಯೆ:ನಅಇ 171 ಎಂಎನ್ಇ 2022(ಇ) ದಿನಾಂಕ:02-11-2023ರ ನಿಯಮ ಬಿ ರಲ್ಲಿ ತಿಳಿಸಿರುವಂತೆ)

6. ಪ್ರಸ್ತಾಪಿತ ಪೌರಕಾರ್ಮಿಕರ ಖಾಯಂಮಾತಿಯು ಗುತ್ತಿಗೆ ಅಥವಾ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಇತರೆ ವರ್ಗಗಳ ನೌಕರರ/ಸಿಬ್ಬಂದಿಗಳಿಗೆ ಪೂರ್ವನಿರ್ದಶನವಾಗುವುದಿಲ್ಲ.
7. ಸದರಿ ನೇಮಕಾತಿಯಲ್ಲಿ ಕಲ್ಯಾಣ ಕರ್ನಾಟಕ ವೃಂದಕ್ಕೆ ಮೀಸಲಿರಿಸಿದ ಹುದ್ದೆಗಳಿಗೆ ಅಭ್ಯರ್ಥಿಗಳು ಲಭ್ಯವಾಗದಿದ ಪಕ್ಷದಲ್ಲಿ ಈ ಮೀಸಲಾದ ಹುದ್ದೆಗಳಿಗೆ ಉಳಿದ ಅರ್ಹರಿರುವ ಅಭ್ಯರ್ಥಿಗಳನ್ನು ನೇಮಕಾತಿಗೆ ಪರಿಗಣಿಸಲಾಗುವುದು.
8. ಸದರಿ ಸಂಖ್ಯಾತಿರಿಕ್ತ ಪೌರಕಾರ್ಮಿಕ ಹುದ್ದೆಗಳ ನೇಮಕಾತಿಯು ಸರ್ಕಾರ ಮತ್ತು ಪೌರಾಡಳಿತ ನಿರ್ದೇಶನಾಲಯದಿಂದ ಕಾಲಕಾಲಕ್ಕೆ ಹೊರಡಿಸಲಾಗುವ ಸುತ್ತೋಲೆಗಳು, ಆದೇಶಗಳು ಮತ್ತು ನಿರ್ದೇಶನಗಳ ಷರತ್ತುಗಳಿಗೆ ಒಳಪಟ್ಟಿರುತ್ತದೆ.

**4. ಶೈಕ್ಷಣಿಕ ವಿದ್ಯಾರ್ಹತೆ ಮತ್ತು ವಯೋಮಿತಿ:**

- ಶೈಕ್ಷಣಿಕ ವಿದ್ಯಾರ್ಹತೆ ಅಗತ್ಯವಿರುವುದಿಲ್ಲ.
- ಕನ್ನಡ ಭಾಷೆ ಮಾತನಾಡುವ ಬಗ್ಗೆ ಜ್ಞಾನವಿರಬೇಕು.
- ಅರ್ಜಿ ಸಲ್ಲಿಸುವ ದಿನಾಂಕದಂದು ಕನಿಷ್ಠ ವಯೋಮಿತಿ 18 ವರ್ಷ ಹೊಂದಿರುಬೇಕು.
- ಗರಿಷ್ಠ ವಯೋಮಿತಿ 55 ವ್ಷರ್ಷಗಳನ್ನು ಮೀರತಕ್ಕದ್ದಲ್ಲ. (ದಿನಾಂಕ:09–03–2023ಕ್ಕೆ)

**5. ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು:**

ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸುವ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

- ಪ.ಜಾ/ಪ.ಪಂ ಅಭ್ಯರ್ಥಿಗಳು ನಮೂನೆ 'ಡಿ' ರಲ್ಲಿ
- ಪ್ರವರ್ಗ–1ರ ಅಭ್ಯರ್ಥಿಗಳು ನಮೂನೆ 'ಇ' ನಲ್ಲಿ ಹಾಗೂ
- 2ಎ,2ಬಿ,3ಎ,3ಬಿ, ಅಭ್ಯರ್ಥಿಗಳು ನಮೂನೆ 'ಎಫ್' ನಲ್ಲಿ
  ಅರ್ಜಿ ಸಲ್ಲಿಸುವ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿಸಿದ ತಹಶೀಲ್ದಾರರವರಿಂದ ಪಡೆದಿರಬೇಕು. ಈ ಹುದ್ದೆಗಳಿಗಾಗಿ ಆಯ್ಕೆ ಹೊಂದುವ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಜಾತಿ ಮೀಸಲಾತಿ ಪ್ರಮಾಣ ಪತ್ರಗಳನ್ನು ಆಯಾ ನೇಮಕಾತಿ ಪ್ರಾಧಿಕಾರದವರು ಅವುಗಳ ಸಿಂಧುತ್ವದ ಪರಿಶೀಲನೆಗೆ ಒಳಪಟ್ಟಂತೆ ನೇಮಕಾತಿಗೆ ಬದ್ಧರಾಗಿರುತ್ತಾರೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವಗ1ರ ಮೀಸಲಾತಿ ಪ್ರಮಾಣ ಪತ್ರಗಳು ರದ್ದಾಗುವವರೆಗೂ ಚಾಲ್ತಿಯಲ್ಲಿರುವುದರಿಂದ, ಅರ್ಜಿ ಸಲ್ಲಿಸುವ ದಿನಾಂಕದೊಳಗೆ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. ಮತ್ತು ಅದರ ಒಂದು ಛಾಯಾ ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು. ಹಿಂದುಳಿದ ವರ್ಗಗಳ ಪ್ರವರ್ಗ–2ಎ, 2ಬಿ. 3ಎ ಮತ್ತು 3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳು ಐದು ವರ್ಷ ಚಾಲ್ತಿಯಲ್ಲಿರುತ್ತವೆ. ಈ ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸುವ ದಿನಾಂಕದಂದು ಚಾಲ್ತಿಯಲ್ಲಿರಬೇಕು ಮತ್ತು ಅದರ ಒಂದು ಛಾಯಾ ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ನಿಯಮಾನುಸಾರ ಸಾಮಾನ್ಯ ಅರ್ಹತೆ ಅಡಿಯಲ್ಲಿ ಪರಿಗಣಿಸಲಾಗುವುದು. (ಅಧಿಸೂಚನೆ ಕೊನೆಯಲ್ಲಿ ಪ್ರಮಾಣ ಪತ್ರಗಳ ನಮೂನೆಯನ್ನು ನೀಡಲಾಗಿರುತ್ತದೆ.)

**6 ಮಾಜಿ ಸೈನಿಕ:**

ಸರ್ಕಾರದ ಅಧಿಸೂಚನೆ ಸಂಖ್ಯೆ : ಡಿಪಿಎಆರ್ 13 ಎಸ್ಆರ್ಆರ್ 92 ದಿನಾಂಕ:01–04–1992 ಮತ್ತು ಅಧಿಸೂಚನೆ ಸಂಖ್ಯೆ: ಡಿಪಿಎಆರ್ 28 ಎಸ್ಆರ್ಆರ್ 95 ದಿನಾಂಕ:21–10–1995 ರನ್ವಯ ನೇರ ನೇಮಕಾತಿಗಳಲ್ಲಿ ಮಾಜಿ ಸೈನಿಕರಿಗೆ ಮೀಸಲಾತಿ ಕಲ್ಪಿಸಲಾಗಿದೆ. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿದ್ದಂತೆ ಮಾಜಿ ಸೈನಿಕರ ವಿವರಣೆ ಕೆಳಕಂಡಂತಿದೆ:

1) ಮಾಜಿ ಸೈನಿಕ ಎಂದರೆ ಕೇಂದ್ರ ಸಶಸ್ತ್ರ ದಳಗಳಾದ ನಿಯಮಿತಿ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ) ಸೇವೆ ಸಲ್ಲಿಸಿದ ವ್ಯಕ್ತಿ ಆದರೆ ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇವೆ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು

2) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುತ್ತಿರುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ಅಂಗವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

ಅಥವಾ

ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಿಂದ ಬಿಡುಗಡೆಯಾದವರು.

ಅಥವಾ

ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ

ಅಥವಾ

ಈ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:

1. ನಿರಂತರ ಸೇವೆ ಸಲ್ಲಿಸಿದ ನಿವೃತ್ತಿ ಹೊಂದಿದ ಪಿಂಚಣಿದಾರರು
2. ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ
3. ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

## 7. ಗ್ರಾಮೀಣ ಅಭ್ಯರ್ಥಿ:

ಗ್ರಾಮೀಣ ಅಭ್ಯರ್ಥಿ ಎಂದರೆ, ಒಂದು ಹುದ್ದೆಗಾಗಿ ನಿಯಮಿಸಲಾದ ಅರ್ಹತಾ ಪರೀಕ್ಷೆಯು ಖುಖುಅ ಅಥವಾ ತತ್ಸಮಾನ ಪರೀಕ್ಷೆಯಾಗಿದ್ದಲ್ಲಿ, 1ನೇ ತರಗತಿಯಿಂದ 10ನೇ ತರಗತಿವರೆಗೆ ಗ್ರಾಮೀಣ ಪ್ರದೇಶದಲ್ಲಿ ವಿದ್ಯಾಭ್ಯಾಸ ಮಾಡಿರುವ ಬಗ್ಗೆ ವ್ಯಾಸಂಗದ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದು ದೃಢೀಕೃತ ಪತ್ರವನ್ನು ಸಲ್ಲಿಸತಕ್ಕದ್ದು. ಗ್ರಾಮೀಣ ಮೀಸಲಾತಿಗೆ ಒಳಪಡುವ ಅಭ್ಯರ್ಥಿಗಳು ಗ್ರಾಮಾಂತರ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು. ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೈಮು ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ–2ರ ಪ್ರಮಾಣ ಪತ್ರವಲ್ಲದೇ, ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ–1ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಪಡೆದು, ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1 ಪ್ರವರ್ಗ–2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ–2ರಲ್ಲಿ ನಿಗಧಿತ ಪ್ರಾಧಿಕಾರಿಗಳಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲುರುಜು ಮತ್ತು ಮೊಹರು ಮಾಡಿಸಿ ಸಲ್ಲಿಸಬೇಕಾಗಿರುತ್ತದೆ. (ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ.)

## 8. ಕನ್ನಡ ಮಾಧ್ಯಮ ಅಭ್ಯರ್ಥಿ:

ಸರ್ಕಾರದ ಅಧಿಸೂಚನೆ ಸಂ:DPAR/71/SRR/2001 dated:24–10–2002 ರಲ್ಲಿ ಹೊರಡಿಸಿರುವ ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು–1977ರ ನಿಯಮ–(9)(1)(ಸಿ)ರನ್ವಯ ಅಭ್ಯರ್ಥಿಯು 01 ರಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆ ಎನ್ನುವ ಬಗ್ಗೆ ನಿಗಧಿತ ಪ್ರಾಧಿಕಾರಿಗಳಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲುರುಜು ಮತ್ತು ಮೊಹರು ಮಾಡಿಸಿ ಸಲ್ಲಿಸಬೇಕಾಗಿರುತ್ತದೆ. (ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ.)

## 9. ವಿಶೇಷ ಚೇತನ ಅಭ್ಯರ್ಥಿಗಳು:

ವಿಶೇಷ ಚೇತನ ಅಭ್ಯರ್ಥಿ ಎಂದರೆ:

- ಕಣ್ಣಿನ ದೃಷ್ಠಿಯನ್ನು ಸರಿಪಡಿಸುವ ಕನ್ನಡಕವನ್ನು ಹಾಕಿದಾಗ ಎರಡು ಕಣ್ಣಿನ ಪೈಕಿ ಉತ್ತಮವಾದ ಕಣ್ಣಿನಲ್ಲಿ 6:60 ಅಥವಾ 20:2000(ಸ್ನೆಲನ್)ಅನ್ನು ಮೀರದಿರುವ ದೃಷ್ಠಿ ಸಾಮರ್ಥ್ಯ ಇರುವ ವ್ಯಕ್ತಿ.
- 20 ಡಿಗ್ರಿಗಳು ಅಥವಾ ಅದಕ್ಕೂ ಕಡಿಮೆಯ ಕೋನದವರೆಗೆ ವಿಸ್ತರಿಸುವ ದೃಷ್ಠಿ ಕ್ಷೇತ್ರದ ಪರಿಮಿತಿಯನ್ನು ಹೊಂದಿರುವ ವ್ಯಕ್ತಿ.
- ಸಂಪೂರ್ಣವಾಗಿ ದೃಷ್ಠಿ ಸಾಮರ್ಥ್ಯವನ್ನು ಕಳೆದುಕೊಂಡಿದ್ದವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.
- ಎಲ್ಲಾ ಸಂದರ್ಭಗಳಲ್ಲಿ ಜೋರಾಗಿ ಮಾತನಾಡುವುದು, ಕೇಳಿಸುವ ಅಥವಾ ಅರ್ಥವಾಗದ ಅಥವಾ ಎರಡು ಕಿವಿಗಳ ಪೈಕಿ ಉತ್ತಮವಾದ ಕಿವಿಯ ಶ್ರವಣ ಶಕ್ತಿಯು 90 ಡೆಸಿಬಲ್‌ಗಳಿಗೂ ಹೆಚ್ಚು ತಗ್ಗಿರುವ (ಅತ್ಯಂತ ಕಡಿಮೆ ಶ್ರವಣ ಶಕ್ತಿಯ) ಅಥವಾ ಎರಡು ಕಿವಿಗಳು ಶ್ರವಣ ಶಕ್ತಿಯನ್ನು ಕಳೆದುಕೊಂಡಿರುವ ವ್ಯಕ್ತಿ ಅಥವಾ ಜೀವನದ ಸಾಮಾನ್ಯ ಉದ್ದೇಶಗಳ ಸಂಬಂಧದಲ್ಲಿ ಶ್ರವಣೇಂದ್ರಿಯ ನಿಷ್ಕ್ರಿಯವಾಗಿದ್ದರೆ ಅಂತಹ ಅಭ್ಯರ್ಥಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.
- ಮೂಳೆಗಳು, ಮಾಂಸಖಂಡಗಳು ಮತ್ತು ಕೀಲುಗಳು ವಾಡಿಕೆಯ ಕಾರ್ಯನಿರ್ವಹಣೆಗೆ ಅಡಚಣೆ ಉಂಟಾಗುವಂತಹ ದೈಹಿಕ ದೋಷ ಅಥವಾ ವಿಕಲತೆ ಹೊಂದಿರುವ ವ್ಯಕ್ತಿಗಳು ಅರ್ಹರಾಗಿರುವುದಿಲ್ಲ.
- ರಾಜ್ಯದ ಸರ್ಕಾರಿ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿರುವ ವೈದ್ಯರು ಅಂಗವಿಕಲರಿಗೆ ವೈದ್ಯಕೀಯ ಪ್ರಮಾಣ ಪತ್ರವನ್ನು ನೀಡಲು ಅಧಿಕಾರ ಹೊಂದಿದವರಾಗಿರುತ್ತಾರೆ.
- ದೈಹಿಕ ಅಂಗವಿಕಲತೆ ಒಳಪಡುವ ಅಭ್ಯರ್ಥಿಗಳು ಮೂಳೆ ತಜ್ಞ (ಆರ್ಥೋಪೆಡಿಕ್ ಸರ್ಜನ್) ರಿಂದ ದೈಹಿಕ ಅಂಗವಿಕಲತೆಯ ಮೌಲಿಕರಣವನ್ನು ಅಲ್ಮಿಕೋ ಕಾನ್‌ಪುರ್ (ಡಬ್ಲ್ಯೂಎಚ್.ಒ. ಸ್ಟ್ಯಾಂಡರ್ಡ) ಇದರ ಆಧಾರದ ಮೇಲೆ ಮಾಡಿಸುವುದು ಕಡ್ಡಾಯವಾಗಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 115 ಸನನಿ 2005 ದಿ: 19–11–2005 ರಲ್ಲಿ ನಿಗದಿಪಡಿಸಿರುವ ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುವ ವೈದ್ಯಕೀಯ ಪ್ರಮಾಣ ಪತ್ರವನ್ನು ಸಕ್ಷಮ ವೈದ್ಯಾಧಿಕಾರಿಗಳಿಂದ ಪಡೆದಿರಬೇಕು ಮತ್ತು ಅಂಗವಿಕಲತೆ ಪ್ರಮಾಣವು ಶೇ.40 ರಿಂದ 75 ಕ್ಕಿಂತ ಹೆಚ್ಚಾಗಿರಬಾರದು. ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಅಂಗವಿಕಲ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸಲು ಬರುವುದಿಲ್ಲ. (ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ)

## 10. ಯೋಜನಾ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳು:

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 71 ಸೆನನಿ 2001 ದಿನಾಂಕ: 24–10–2002 ರನ್ವಯ ಯೋಜನಾ ನಿರಾಶ್ರಿತರ ಗುಂಪಿಗೆ ಮೀಸಲಿರಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ 23, ಸನನಿ 99 ದಿನಾಂಕ: 23–11–2000 ರನ್ವಯ ಯೋಜನೆಗಳಿಂದ ನಿರ್ವಸಿತರಾದ ( ಆದರೆ ಈ ನಿಯಮಗಳು ಜಾರಿಯಾಗುವ 20 ವರ್ಷಕ್ಕೆ ಮುನ್ನ ನಿರ್ವಸಿತರಾದ ಕುಟುಂಬ ಅಭ್ಯರ್ಥಿಗಳಿಗೆ ಈ ಮೀಸಲಾತಿ ಅನ್ವಯವಾಗುವುದಿಲ್ಲ) ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಸಂಬಂಧಿತ ತಹಶೀಲ್ದಾರ್‌ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸುವ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು, ಅರ್ಹರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ)

11. **ತೃತೀಯ ಲಿಂಗ ಅಭ್ಯರ್ಥಿಗಳು :**

ತೃತೀಯ ಲಿಂಗದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತ ಅಭ್ಯರ್ಥಿಗಳು ಕೇಂದ್ರ ತೃತೀಯ ಲಿಂಗ ವ್ಯಕ್ತಿಗಳು (ಹಕ್ಕುಗಳ ರಕ್ಷಣೆ) ಅಧಿನಿಯಮ–2019ರಲ್ಲಿ ನಿಗಧಿಪಡಿಸಿರುವಂತೆ ಜಿಲ್ಲಾ ಮ್ಯಾಜಿಸ್ಟ್ರೇಟ್ ರವರಿಂದ ಪ್ರಮಾಣ ಪತ್ರವನ್ನು ನಿಗಧಿಪಡಿಸಿದ ಕೊನೆಯ ದಿನಾಂಕದಿಂದ ಚಾಲ್ತಿಯಲ್ಲಿರುವಂತೆ ಪಡೆದಿಟ್ಟುಕೊಂಡಿರತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿ ರದ್ದುಪಡಿಸಲಾಗುವುದು.

**12. ಅರ್ಜಿ ನಮೂನೆಯೊಂದಿಗೆ ಸಲ್ಲಿಸಬೇಕಾದ ದಾಖಲಾತಿಗಳು:**

- ಜನ್ಮ ದಿನಾಂಕವನ್ನು ನಮೂದಿಸಿರುವ ಶೈಕ್ಷಣಿಕ/ವಿದ್ಯಾರ್ಹತೆ ದಾಖಲಾತಿಗಳು ಅಥವಾ ಆಧಾರ ಕಾರ್ಡ ಅಥವಾ ಪಡಿತರ ಚೀಟಿ ಅಥವಾ ಮತದಾರರ ಗುರುತಿನ ಚೀಟಿ ಅಥವಾ ಪ್ರಾವಿಡೆಂಟ್ ಫಂಡ್ ಅಥವಾ ಇ.ಎಸ್.ಐ ಪ್ರಮಾಣ ಪತ್ರ.
- **ನೇರಪಾವತಿಯಡಿ ಕೆಲಸ ನಿರ್ವಹಿಸುತ್ತಿರುವ ಪೌರಕಾರ್ಮಿಕರು** ಸೇವಾ ಪ್ರಮಾಣ ಪತ್ರ ಹಾಗೂ 02 ವರ್ಷ ಮೇಲ್ಪಟ್ಟು ವೇತನ ಪಡೆದ ದಾಖಲಾತಿಗಳ ಪ್ರತಿ ಲಗತ್ತಿಸುವುದು.
- **ದಿನಗೂಲಿ ಕೆಲಸ ನಿರ್ವಹಿಸುತ್ತಿರುವ ಪೌರಕಾರ್ಮಿಕರು:** ದಿನಗೂಲಿ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಸಕ್ಷಮ ಪ್ರಾಧಿಕಾರದಿಂದ ನೇಮಕಾತಿ ಆದೇಶ ಅಥವಾ ನಡವಳಿ ಪ್ರತಿ ಅಥವಾ ಸೇವಾ ಪ್ರಮಾಣ ಪತ್ರ ಲಗತ್ತಿಸುವುದು.
- **ಕ್ಷೇಮಾಭಿವೃದ್ದಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ಪೌರಕಾರ್ಮಿಕರು:** ಕರ್ನಾಟಕ ರಾಜ್ಯ ದಿನಗೂಲಿ ನೌಕರರ ಕಲ್ಯಾಣ ಕಾಯ್ದೆ–2012 (ಕರ್ನಾಟಕ ಕಾಯ್ದೆ 19/2013)ರನ್ವಯ ಅಧಿಸೂಚನೆಯಲ್ಲಿರುವ ನೌಕರರ ಹೆಸರನ್ನೊಳಗೊಂಡ ಪ್ರತಿ ಲಗತ್ತಿಸುವುದು.
- **ಸಮಾನ ಕೆಲಸಕ್ಕೆ ಸಮಾನ ವೇತನದಡಿ ಕೆಲಸ ನಿರ್ವಹಿಸುತ್ತಿರುವ ಪೌರಕಾರ್ಮಿಕರು:** ನೇಮಕಾತಿ ಆದೇಶ ಪತ್ರ ಅಥವಾ ಸೇವಾ ಪ್ರಮಾಣ ಪತ್ರ ಪಾಲಿಕೆಯಲ್ಲಿ ಸೇವೆ ಸಲ್ಲಿಸುತ್ತಿರುವ ಅವಧಿಗೆ ಅನುಗುಣವಾಗಿ ಪ್ರಮಾಣ ಪತ್ರ ಮತ್ತು 02 ವರ್ಷ ಮೇಲ್ಪಟ್ಟು ವೇತನ ಪಡೆದ ದಾಖಲೆ ಲಗತ್ತಿಸುವುದು.
- ಸೈನಿಕ ಸೇವೆಯಿಂದ ಬಿಡುಗಡೆಯಾದ/ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ).
- ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ, 3ಬಿ ಗಳ ಜಾತಿ ಪ್ರಮಾಣ ಪತ್ರಗಳು (ಮೀಸಲಾತಿ ಕೋರಿದ್ದಲ್ಲಿ).
- ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ–1 ಮತ್ತು 2ರಲ್ಲಿ (ಮೀಸಲಾತಿ ಕೋರಿದ್ದಲ್ಲಿ).
- ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ).
- ವಿಶೇಷ ಚೇತನ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ).
- ಯೋಜನೆಗಳಿಂದ ನಿರಾಶ್ರಿತರಾದ ಬಗ್ಗೆ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ).
- ವಿಜಯಪುರ ಮಹಾನಗರಪಾಲಿಕೆಯಲ್ಲಿ **ಪೌರಕಾರ್ಮಿಕರ** ಹುದ್ದೆಯಲ್ಲಿ ಕಾರ್ಯನಿರ್ವಹಿಸಿರುವ ಬಗ್ಗೆ ಪಾಲಿಕೆಯಿಂದ ನೀಡಿದ ಸೇವಾ ಪ್ರಮಾಣ ಪತ್ರ ಲಗತ್ತಿಸುವುದು.

ಮೇಲ್ಕಂಡಂತೆ ನಿಗಧಿಪಡಿಸಿದ ಎಲ್ಲಾ ದಾಖಲೆಗಳನ್ನು ಗೆಜೆಟೆಡ್ ಅಧಿಕಾರಿಗಳಿಂದ ದೃಢೀಕರಿಸಿ ಸಲ್ಲಿಸುವುದು. ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ದಾಖಲಾತಿಗಳ ಪರಿಶೀಲನೆಯ ಸಮಯದಲ್ಲಿ ಮೂಲ ದಾಖಲಾತಿಗಳನ್ನು ಹಾಜರುಪಡಿಸತಕ್ಕದ್ದು.

**13. ಪಾಲಿಕೆಯೊಂದಿಗೆ ಪತ್ರ ವ್ಯವಹಾರ:**

ಪಾಲಿಕೆಯು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ಆದುದರಿಂದ ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವಾಗ ಜಾಗರೂಕತೆಯಿಂದ ಭರ್ತಿ ಮಾಡತಕ್ಕದ್ದು.

14. ಎ) **ಪ್ರಾಮುಖ್ಯವಾದ ಸೂಚನೆಗಳು:**

- ವೃಂದ/ ಹುದ್ದೆ ಬದಲಾವಣೆಗೆ ಸೇವಾ ನಿಯಮಾವಳಿಗಳಲ್ಲಿ ಅವಕಾಶವಿರುವುದಿಲ್ಲ. (ಅಂದರೆ ಪೌರಕಾರ್ಮಿಕ ಹುದ್ದೆಯಿಂದ ಇತರೆ ಗ್ರೂಪ್– ಡಿ / ಸಮನಾಂತರ ಹುದ್ದೆಗಳಿಗೆ ಬದಲಾವಣೆಗೊಳ್ಳಲು ಅವಕಾಶವಿರುವುದಿಲ್ಲ.

- ಸದರಿ ಹುದ್ದೆಗೆ ಯಾವುದೇ ಸಂದರ್ಶನ ನಿಗದಿಪಡಿಸಿರುವುದಿಲ್ಲ.
- ಅಭ್ಯರ್ಥಿಯು ಇತ್ತೀಚಿನ ಪಾಸ್‌ಪೋರ್ಟ ಅಳತೆಯ ಭಾವಚಿತ್ರವನ್ನು ಅರ್ಜಿಯಲ್ಲಿ ಲಗತ್ತಿಸಿರಬೇಕು.
- ಅಪೂರ್ಣ ಅರ್ಜಿಗಳನ್ನು ಹಾಗೂ ಕಡ್ಡಾಯವಾಗಿ ಲಗತ್ತಿಸಬೇಕಾದ ದಾಖಲೆಗಳನ್ನು ಲಗತ್ತಿಸದೇ ಇದ್ದಲ್ಲಿ ಅಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
- ನಿಗದಿತ ನಮೂನೆ ಮೂಲಕ ಅರ್ಜಿ ಸಲ್ಲಿಸುವಾಗ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ಖಚಿತಪಡಿಸಿಕೊಂಡು ನಂತರ ಅರ್ಜಿ ಸಲ್ಲಿಸಬೇಕು.

**ಬಿ) ಇತರೆ ಸೂಚನೆಗಳು:**

- ಅರ್ಜಿಯಲ್ಲಿ ತಪ್ಪು/ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆದಲ್ಲಿ ಅಂತಹ ಅಭ್ಯರ್ಥಿಗಳ ನೇಮಕಾತಿಯನ್ನು ವಜಾಗೊಳಿಸುವುದಲ್ಲದೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.
- ಅರ್ಜಿಗಳನ್ನು ಸ್ವೀಕರಿಸಲು ನಿಗಧಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೇ ದಿನವು ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕವಾಗುವುದು.
- ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು, ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿ ಕೊಡಲಾಗುವುದು.
- ಅಂತಿಮವಾಗಿ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಮುನ್ನ ಯಾವುದೇ ಹಂತದಲ್ಲಿ ಯಾವುದೇ ಕಾರಣ/ಮಾಹಿತಿ ನೀಡದೇ ಈ ನೇಮಕಾತಿ ಪ್ರಕ್ರಿಯೆಯನ್ನು ಮುಂದೂಡುವ ಅಥವಾ ರದ್ದುಪಡಿಸುವ ಅಥವಾ ವಿಧಿಸಲಾಗಿರುವ ಯಾವುದೇ ಷರತ್ತನ್ನು ಸಡಿಲಗೊಳಿಸುವ ಅಥವಾ ಹೆಚ್ಚುವರಿ ಷರತ್ತನ್ನು ವಿಧಿಸುವ, ತುಂಬಲಾಗುವ ಹುದ್ದೆಗಳ ಸಂಖ್ಯೆಯನ್ನು ಬದಲಾಯಿಸುವ/ನಿರ್ಣಯಿಸುವ ಅಧಿಕಾರವನ್ನು ಅಧ್ಯಕ್ಷರು, ಪೌರಕಾರ್ಮಿಕರ ನೇರ ನೇಮಕಾತಿ (ವಿಶೇಷ) ಆಯ್ಕೆ ಪ್ರಾಧಿಕಾರ, ಹಾಗೂ ಆಯುಕ್ತರು ವಿಜಯಪುರ ಮಹಾನಗರಪಾಲಿಕೆ ವಿಜಯಪುರರವರು ಕಾಯ್ದಿರಿಸಿಕೊಂಡಿರುತ್ತಾರೆ.
- ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆ ಪಟ್ಟಿಯಲ್ಲಿ ಸೇರ್ಪಡೆಯಾಗಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿ ಹಕ್ಕು ದೊರೆಯುವುದಿಲ್ಲ.
- ಆಯ್ಕೆ ಮಾಡಲಾದ ಅಭ್ಯರ್ಥಿಗಳು ನಿಗಧಿತ ಅವಧಿಯೊಳಗೆ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದೇ ಇದ್ದಲ್ಲಿ ಸದರಿ ಅಭ್ಯರ್ಥಿಯ ಬದಲಾಗಿ ಅದೇ ಪ್ರವರ್ಗದ ಮೀಸಲಾತಿಯಲ್ಲಿ ಹೆಚ್ಚುವರಿ ಪಟ್ಟಿಯಲ್ಲಿ ಆಯ್ಕೆಯಾಗಿರುವ ಮತ್ತೊಬ್ಬ ಅಭ್ಯರ್ಥಿಯನ್ನು ಪರಿಗಣಿಸಲಾಗುವುದು.
- ಅರ್ಜಿಗಳನ್ನು ಮಹಾನಗರಪಾಲಿಕೆ ವಿಜಯಪುರ ಕೇಂದ್ರ ಕಚೇರಿಗೆ ನೇರವಾಗಿ ಸಲ್ಲಿಸಿ ಸ್ವೀಕೃತಿ ಪಡೆಯತಕ್ಕದ್ದು. ಅಂಚೆ ಮೂಲಕ ಸಲ್ಲಿಸಲು ಅವಕಾಶವಿರುವುದಿಲ್ಲ.
- ಕೊನೆಯ ದಿನಾಂಕದ ನಂತರ ಹಾಕಿದ ಅರ್ಜಿಯನ್ನು ಮತ್ತು ಅಪೂರ್ಣವಾದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
- ಮೀಸಲಾತಿಯಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಂದ (ಅಧ್ಯಕ್ಷರು, ಜಾತಿ ಆದಾಯ ಪರಿಶೀಲನಾ ಸಮಿತಿ) ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.
- ಇತರೆ ವರ್ಗೀಕರಣದ ಅಡಿಯಲ್ಲಿ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರವು ನೀಡಿರುವ ಪ್ರಮಾಣ ಪತ್ರಗಳನ್ನು ಅರ್ಜಿಯ ಜೊತೆಗೆ ಸಲ್ಲಿಸತಕ್ಕದ್ದು.
- ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ಅಧ್ಯಕ್ಷರು, ಪೌರಕಾರ್ಮಿಕರ ನೇರ ನೇಮಕಾತಿ (ವಿಶೇಷ) ಆಯ್ಕೆ ಪ್ರಾಧಿಕಾರ, ಹಾಗೂ ಆಯುಕ್ತರು ವಿಜಯಪುರ ಮಹಾನಗರಪಾಲಿಕೆ ವಿಜಯಪುರ ಇವರು ಕಾಯ್ದಿರಿಸಿಕೊಂಡಿರುತ್ತಾರೆ.
- ಅಭ್ಯರ್ಥಿಗಳು ಅಭ್ಯರ್ಥಿಕೆಯ ಸಂದರ್ಭದಲ್ಲಿ ಕಛೇರಿ ಸಿಬ್ಬಂದಿ ಅಥವಾ ಸಿಬ್ಬಂದಿಯೇತರ ಮೂಲಗಳ ಮೂಲಕ ಯಾವುದೇ ರೀತಿಯ ಶಿಫಾರಸ್ಸು ಅಥವಾ ಬೆಂಬಲವನ್ನು ಪಡೆಯುವ ಪ್ರಯತ್ನ ಮಾಡಿದಲ್ಲಿ ಅಂತಹ ಅಭ್ಯರ್ಥಿಗಳ ನೇಮಕಾತಿ/ಅಭ್ಯರ್ಥಿಕೆಯನ್ನು ಅನರ್ಹಗೊಳಿಸಲಾಗುವುದು.
- ಹೆಚ್ಚಿನ ಮಾಹಿತಿಗಾಗಿ ವಿಜಯಪುರ ಮಹಾನಗರಪಾಲಿಕೆಯ ಆಡಳಿತ ವಿಭಾಗಕ್ಕೆ ಸಂಪರ್ಕಿಸತಕ್ಕದ್ದು.

ಸಿ) **<u>ದುರ್ನಡತೆ:</u>** ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು, ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸುರುವನೆಂದ ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅವನು/ಅವಳು ಸ್ವತಃ ಕ್ರಿಮಿನಲ್ ವ್ಯವಹರಣಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದು ಪಡಿಸಲಾಗುವುದು.

ಡಿ) ಈ ಅಧಿಸೂಚನೆಯನ್ನು ಪಾಲಿಕೆಯ ಅಧಿಕೃತ ವೆಬ್‌ಸೈಟ್ www.vijayapuracity.mrc.gov.in ನಲ್ಲಿ ಪ್ರಚುರಪಡಿಸಲಾಗಿದೆ.

ಇ) ಈ ಅಧಿಸೂಚನೆ ನೇಮಕಾತಿ ಆದೇಶವಲ್ಲ.

ಸಹಿ/–
ಅಧ್ಯಕ್ಷರು,
ಪೌರಕಾರ್ಮಿಕರ ನೇರನೇಮಕಾತಿ (ವಿಶೇಷ)
ಆಯ್ಕೆ ಪ್ರಾಧಿಕಾರ ಹಾಗೂ ಆಯುಕ್ತರು
ಮಹಾನಗರಪಾಲಿಕೆ ವಿಜಯಪುರ

**<u>ಯಥಾ ಪ್ರತಿಗಳನ್ನು:</u>**

1. ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಬೆಂಗಳೂರುರವರಿಗೆ ಮಾಹಿತಿಗಾಗಿ ಗೌರವಗಳೊಂದಿಗೆ ಸಲ್ಲಿಸಿದೆ.
2. ಮಾನ್ಯ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರುರವರಿಗೆ ಮಾಹಿತಿಗಾಗಿ ಗೌರವಗಳೊಂದಿಗೆ ಸಲ್ಲಿಸಿದೆ.
3. ಮಾನ್ಯ ಜಿಲ್ಲಾಧಿಕಾರಿಗಳು, ಜಿಲ್ಲಾಧಿಕಾರಿಗಳ ಕಾರ್ಯಾಲಯ, ವಿಜಯಪುರರವರಿಗೆ ಮಾಹಿತಿಗಾಗಿ ಗೌರವಗಳೊಂದಿಗೆ ಸಲ್ಲಿಸಿದೆ.
4. ಸಂಕಲನಾಧಿಕಾರಿ, ಸರ್ಕಾರಿ ಹೊರವಲಯ ಮುದ್ರಾಣಾಲಯ, ಆರ್ವಿ ಕಾಲೇಜ್ ಅಂಚೆ, 8ನೇ ಮೇನ್, ಮೈಸೂರು ರಸ್ತೆ, ಕೆಂಗೇರಿ, ಬೆಂಗಳೂರು–560059 ಕರ್ನಾಟಕ ರಾಜ್ಯ ಪತ್ರ ಬೆಂಗಳೂರು ಇವರಿಗೆ ಕಳುಹಿಸುತ್ತಾ, ಈ ಅಧಿಸೂಚನೆಯನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ 50 ಪ್ರತಿಗಳನ್ನು ಆಯುಕ್ತರು, ಮಹಾನಗರಪಾಲಿಕೆ ವಿಜಯಪುರ ರವರಿಗೆ ಒದಗಿಸಲು ಕೋರಿದೆ.
5. ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು, ವಿಜಯಪುರ
6. ಈ ಕಾರ್ಯಾಲಯದ ಸೂಚನಾ ಫಲಕಕ್ಕೆ ಹಾಗೂ ಪಾಲಿಕೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸಲು ಸೂಚಿಸಿದೆ.
7. ಕಚೇರಿ ಪ್ರತಿ.